## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸಿ.ಎಸ್.ರಾಜಶೇಖರೇಗೌಡ, ಉಪನಿರ್ದೇಶಕರು, ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಇವರ ವಿರುದ್ಧದ ಇಲಾಖಾ ವಿಚಾರಣೆ ಅಂತಿಮ ಆದೇಶ.

**ಓದಲಾಗಿದೆ:-**
1. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ: 23.01.2015
2. ಅಧಿಕಾರಿಯ ಲಿಖಿತ ಹೇಳಿಕೆ ದಿನಾಂಕ: 05.02.2015 ಮತ್ತು 04.02.2016
3. ನಿರ್ದೇಶಕರು ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ: ಗ್ರಾಅಪ 19 ಸಾಪನಿ(ಉಘಾಯೋ) 2013, ದಿನಾಂಕ: 15.03.2016

****

**ಪ್ರಸ್ತಾವನೆ:**

ಮೂಲತ: ಲೋಕೋಪಯೋಗಿ ಇಲಾಖೆಯ ಸೇವೆಗೆ ಸೇರಿದ ಶ್ರೀ ಸಿ.ಎಸ್.ರಾಜಶೇಖರಗೌಡ, ಸಹಾಯಕ ಕಾರ್ಯಪಾಲಕ ಅಭಿಯಯಂತರರು ಹಾಗೂ ಪ್ರಸ್ತುತ ನಿಯೋಜನೆ ಮೇರೆಗೆ ಉಪನಿರ್ದೇಶಕರು (ಸುಗ್ರಾಯೋ) ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಇವರನ್ನು ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ನಿಯಮ 16(ಎ) (ii)ರ ಪ್ರಕಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಆಯುಕ್ತರ ಆಪ್ತ ಸಿಬ್ಬಂದಿ ಶಾಖೆಯಲ್ಲಿನಉಪನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ ಹುದ್ದೆಯಲ್ಲಿ ಖಾಯಂ ಆಗಿ ವರ್ಗಾವಣೆ ಮೂಲಕ ದಿನಾಂಕ: 30.10.2014ರ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 170 ಪಬವ 2013 ರಲ್ಲಿ, ವಿಲೀನಗೊಳಿಸಲಾಗಿತ್ತು. ನಂತರ ದಿನಾಂಕ: 15.11.2014 ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 170 ಪಬವ 2013 ರಲ್ಲಿ, ಅಧಿಕಾರಿಯ ಸೇವೆಯನ್ನು ನಿರ್ದೇಶಕರು (ಪಂ.ರಾಜ್-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ವ್ಯಾಪ್ತಿಯಲ್ಲಿನ ಶಾಖೆಯ ಕರ್ತವ್ಯಗಳನ್ನು ನಿರ್ವಹಿಸುವಂತೆ ಆದೇಶಿಸಲಾಗಿತ್ತು. ಆದರೆ ಅಧಿಕಾರಿಯು ಸದರಿ ಹುದ್ದೆಗೆ ಹಾಜರಾಗದೇ ಸರ್ಕಾರಿ ಕಚೇರಿ ಕೆಲಸಗಳಿಗೆ ತೊಡಕುಂಟು ಮಾಡಿರುವುದಲ್ಲದೆ, ಸರ್ಕಾರದ ನಿಯಮಗಳನ್ನು ಪಾಲಿಸದೇ, ಕರ್ತವ್ಯಲೋಪವೆಸಗಿದ್ದ ಕಾರಣ, ಮೇಲೆ ಓದಲಾದ (1) ರಲ್ಲಿ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 12(1)(ಎ) ರನ್ವಯ, ಅಧಿಕಾರಿಗೆ ಕಾರಣ ಕೇಳುವ ನೋಟಿಸನ್ನು ಜಾರಿ ಮಾಡಲಾಗಿದ್ದು, ಇದಕ್ಕೆ ಅಧಿಕಾರಿಯು ಮೇಲೆ ಓದಲಾದ (2) ರಲ್ಲಿ ತಮ್ಮ ಲಿಖಿತ ರಕ್ಷಣಾ ಹೇಳಿಕೆಯಲ್ಲಿ ತಾವು ಸಾಮಾಜಿಕ ಪರಿಶೋಧನಾ ವಿಭಾದಲ್ಲಿ ಓಓಡಿ ಆಧಾರದ ಮೇಲೆ ಜಂಟಿ ನಿರ್ದೇಶಕರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ತಮ್ಮನ್ನು ದಿನಾಂಕ: 12.12.2014ರ ಅಪರಾಹ್ನ ಸದರಿ ಹುದ್ದೆಯ ಕರ್ತವ್ಯದಿದಂದ ಬಿಡುಗಡೆಗೊಳಿಸಿದ್ದರಿಂದ ತಾವು ಉಪನಿರ್ದೇಶಕರು ಮತ್ತು ಪದನಿಮಿತ್ತ

ಸರ್ಕಾರದ ಅಧಿನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿದ್ದು, ಇದರಲ್ಲಿ ಯಾವುದೇ ದುರುದ್ದೇಶಪೂರ್ವಕ ವಿಳಂಬವಾಗಿರುವುದಿಲ್ಲವೆಂದು, ಆದ್ದರಿಂದ ತಮ್ಮ ವಿರುದ್ಧ ಶಿಸ್ತುಕ್ರಮವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ಶ್ರೀ ಸಿ.ರಾಜಶೇಖರೇಗೌಡ, ಇವರನ್ನು ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದಿಂದ ದಿನಾಂಕ: 12.12.2014ರ ಅಪರಾಹ್ನ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿರುತ್ತದೆ ಎಂದು ಮೇಲೆ ಓದಲಾದ (3)ರ ಪತ್ರದಲ್ಲಿ ನಿರ್ದೇಶಕರು ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಇವರು ತಿಳಿಸಿರುತ್ತಾರೆ.

ಅಧಿಕಾರಿಯು ನೀಡಿರುವ ಲಿಖಿತ ರಕ್ಷಣಾ ಹೇಳಿಕೆ ಹಾಗೂ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಸದರಿ ಅಧಿಕಾರಿಯು ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ಜಂಟಿ ನಿರ್ದೇಶಕರ ಹುದ್ದೆಯಿಂದ, ಬಿಡುಗಡೆಹೊಂದಿ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಉಪನಿರ್ದೇಶಕರ ಹುದ್ದೆಯಲ್ಲಿ ವರದಿಮಾಡಿಕೊಳ್ಳಲು ವಿಳಂಬವಾಗಿದ್ದು, ಇದರಲ್ಲಿ ಯಾವುದೇ ದುರದ್ದೇಶ ಇಲ್ಲದೆ ಇರುವುದು ಕಂಡುಬಂದಿರುತ್ತದೆ. ಈ ಪ್ರಕರಣವನ್ನು ಈಹಂತಕ್ಕೆ ಮುಕ್ತಾಯಗೊಳಿಸಲು ತೀರ್ಮಾನಿಸಲಾಗಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 314 ಪಬವ 2014 ಬೆಂಗಳೂರು ದಿನಾಂಕ: 07-06-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಸಿ.ಎಸ್.ರಾಜಶೇಖರೆಗೌಡ, ಉಪನಿರ್ದೇಶಕರು (ಸುಗ್ರಾಯೋ) ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,(ಪ್ರಸ್ತುತ ನಿವೃತ್ತ) ಇವರನ್ನು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ 12(1)(ಎ) ರನ್ವಯ, ದಿನಾಂಕ: 23.01.2015 ಕಾರಣ ಕೇಳುವ ನೋಟಿಸಿನಲ್ಲಿ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

7/6/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ,**

1. ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01

2. ನಿರ್ದೇಶಕರು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸಂಬಂಧಿಸಿದ ಅಧಿಕಾರಿಗೆ.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶೀ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ(ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.